## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** | : | **925 (61)** |
| **ಮಾನ್ಯ ಸದಸ್ಯರ ಹೆಸರು** | : | **ಡಾ:ಚಂದ್ರಶೇಖರ್ ಬಿ.ಪಾಟೀಲ್ (ಪದವೀಧರರ ಕ್ಷೇತ್ರ)** |
| **ಉತ್ತರಿಸುವ ದಿನಾಂಕ** | : | **20.02.2024** |
| **ಉತ್ತರಿಸುವ ಸಚಿವರು** | : | **ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು** |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಬೀದರ್ ಜಿಲ್ಲೆ ಹುಮನಾಬಾದ್ ಪಟ್ಟಣದ ಕೈಗಾರಿಕಾ ಪ್ರದೇಶದ ಕಾರ್ಖಾನೆಗಳಿಗೆ ಯಾವುದೇ ಅನುಮತಿ ಇಲ್ಲದೇ ಕೃಷಿ ಬಾವಿಯಿಂದ ಪೈಪ್‌ಲೈನ್ ಮೂಲಕ ನೀರು ಸರಬರಾಜು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೀದರ್ ಜಿಲ್ಲೆ ಹುಮಾನಾಬಾದ್‌ನ ಗಡವಂತಿ ಗ್ರಾಮದ ಒಟ್ಟು 482-30 ಎ-ಗು ಜಮೀನಿನಲ್ಲಿ ಕೈಗಾರಿಕಾ ಪ್ರದೇಶವನ್ನು ಅಭಿವೃದ್ಧಿಪಡಿಸಲಾಗಿರುತ್ತದೆ.<br><br>ಸದರಿ ಕೈಗಾರಿಕಾ ಪ್ರದೇಶದಲ್ಲಿ ಒಟ್ಟು 178 ಘಟಕಗಳಿಗೆ ಕೈಗಾರಿಕೆಗಳನ್ನು ಸ್ಥಾಪಿಸಲು 390.96 ಎಕರೆ ಜಮೀನನ್ನು ಹಂಚಿಕೆ ಮಾಡಲಾಗಿರುತ್ತದೆ.<br><br>ಸದರಿ 178 ಕೈಗಾರಿಕಾ ಘಟಕಗಳಲ್ಲಿ 10 ಘಟಕಗಳು ರಾಸಾಯನಿಕ ತಯಾರಿಕಾ ಘಟಕಗಳಾಗಿರುತ್ತವೆ. ಸದರಿ ಕೈಗಾರಿಕಾ ಪ್ರದೇಶಕ್ಕೆ ಈ ಹಿಂದೆ ಮಂಡಳಿ ವತಿಯಿಂದ 2 ತೆರೆದ ಬಾವಿ ಮತ್ತು 2 ಬೋರ್‌ವೆಲ್‌ಗಳಿಂದ ನೀರು ಸರಬರಾಜು ಮಾಡಲಾಗುತ್ತಿತ್ತು.<br><br>ಆದರೆ, ಪರಿಸರ ಮಾಲಿನ್ಯ ಅಧಿಕಾರಿಗಳು ಬಾವಿ ನೀರು ಕಲುಷಿತಗೊಂಡಿದೆ ಎಂದು ತಿಳಿಸಿದ್ದರಿಂದ, ಮಂಡಳಿ ವತಿಯಿಂದ ಕೈಗಾರಿಕಾ ಘಟಕಗಳಿಗೆ ಯಾವುದೇ ನೀರಿನ ಸೌಲಭ್ಯ ಒದಗಿಸುತ್ತಿರುವುದಿಲ್ಲ.<br><br>ಪ್ರಸ್ತುತ ಸದರಿ ಕೈಗಾರಿಕಾ ಪ್ರದೇಶದಲ್ಲಿ ನೀರಿನ ಅಭಾವವಿರುವುದರಿಂದ ಕೈಗಾರಿಕಾ ಘಟಕಗಳು ತಮ್ಮ ದಿನನಿತ್ಯದ ಉಪಯೋಗಕ್ಕಾಗಿ ಕೈಗಾರಿಕಾ ಪ್ರದೇಶಕ್ಕೆ ಹೊಂದಿಕೊಂಡಿರುವ ಖಾಸಗಿ ಜಮೀನಿನ ಮಾಲೀಕರಿಂದ ಟ್ಯಾಂಕರ್‌ಗಳಲ್ಲಿ ನೀರನ್ನು ಪಡೆದುಕೊಳ್ಳುತ್ತಿರುತ್ತಾರೆ.<br><br>ಮಂಡಳಿ ವತಿಯಿಂದ ಸದರಿ ಕೈಗಾರಿಕಾ ಪ್ರದೇಶದ ಆಸು ಪಾಸಿನಲ್ಲಿ ಲಭ್ಯವಿರುವ ನೀರಿನ ಮೂಲಗಳನ್ನು ಅನ್ವೇಷಿಸಲಾಗುತ್ತಿದ್ದು, ಈ ಕೈಗಾರಿಕಾ ಪ್ರದೇಶದ ಕೈಗಾರಿಕಾ ಘಟಕಗಳಿಗೆ ನೀರು ಸರಬರಾಜು ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |
| ಆ | ಬಂದಿದ್ದಲ್ಲಿ ಸರ್ಕಾರ ಕೈಗೊಂಡ ಕ್ರಮವೇನು; | |
| ಇ | ಅನಧಿಕೃತವಾಗಿ ಕಾರ್ಖಾನೆಗಳಿಗೆ ನೀರು ಸರಬರಾಜು ಮಾಡುತ್ತಿರುವವರ ವಿರುದ್ಧ ಕೈಗೊಂಡ ಕ್ರಮವೇನು? | |

**ಸಂಖ್ಯೆ: ಸಿಐ 80 ಐಎಪಿ 2024**

**(ಎಂ.ಬಿ. ಪಾಟೀಲ)**
**ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು.**